ವಾವಿಸಂ:761

# ಅ.ಭಾ.84 ನೇ ಕನ್ನಡ ಸಾಹಿತ್ಯ ಸಮ್ಮೇಳನ
# ಡಿ.31 ರಂದು ಚಿತ್ರಕಲಾ ಶಿಬಿರ

**ಧಾರವಾಡ ( ಕರ್ನಾಟಕ ವಾರ್ತೆ) ಡಿ.29:** ಅಖಿಲಭಾರತ 84ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಡಿಸೆಂಬರ್ 31 ರಿಂದ ಜನವರಿ 2 ರ ವರೆಗೆ ಮೂರು ದಿನಗಳ ಕಾಲ ಚಿತ್ರಕಲಾ ಸಮಿತಿಯು ಹಿರಿಯ ಹಾಗೂ ಯುವ ಕಲಾವಿದರ ಚಿತ್ರಕಲಾ ಶಿಬಿರವನ್ನು ಆಯೋಜಿಸಿದೆ.

ಚಿತ್ರಕಲಾ ಶಿಬಿರವನ್ನು ಡಿ. 31 ರಂದು ಬೆಳಿಗ್ಗೆ 10:30 ಗಂಟೆಗೆ ಸರ್ಕಾರಿ ಆರ್ಟ್ ಗ್ಯಾಲರಿಯಲ್ಲಿ ಜಿಲ್ಲಾಧಿಕಾರಿ ದೀಪಾ ಚೋಳನ್ ಉದ್ಘಾಟಿಸುವರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಬಿ.ಸಿ. ಸತೀಶ್, ಹಿರಿಯ ಕಲಾವಿದ ಎಂ.ಆರ್. ಬಾಳಿಕಾಯಿ, ಹಿರಿಯ ಕಲಾವಿದೆ ಗಾಯತ್ರಿ ದೇಸಾಯಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಲಿಂಗರಾಜ ಅಂಗಡಿ ಅಧ್ಯಕ್ಷತೆ ವಹಿಸುವರು.

ಚಿತ್ರಕಲಾ ಶಿಬಿರದಲ್ಲಿ ವಿವಿಧ ಜಿಲ್ಲೆಗಳಿಂದ ಹಿರಿಯ ಕಲಾವಿದರು ಹಾಗೂ ಯುವ ಕಲಾವಿದರು ಪಾಲ್ಗೊಳ್ಳುವರು.

***************